


ಚಾಮುಂಡಿ ಬೆಟ್ಟದ ಮೇಲೆ ಅಭಿವೃದ್ಧಿ ಕಾಮಗಾರಿ ಭರದಿಂದ ನಡೆಯುತ್ತಿದೆ.

### ತಿರುಪತಿ ಮಾದರಿ ಅಭಿವೃದ್ಧಿ

ಈವರೆಗೆ ಬೂದಿ ಮುಚ್ಚಿದಂತಿದ್ದ ಈ ವಾದಕ್ಕೆ ದೊಡ್ಡ ಸ್ವರ ಬಂದದ್ದು ಇತ್ತೀಚೆಗೆ ಚಾಮುಂಡಿ ಬೆಟ್ಟವನ್ನು 'ತಿರುಪತಿ ಮಾದರಿ'ಯಲ್ಲಿ ಅಭಿವೃದ್ಧಿ ಮಾಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದ ಬಳಿಕ. 2–3 ತಿಂಗಳ ಹಿಂದೆ ಚಾಮುಂಡಿ ಬೆಟ್ಟದಲ್ಲಿ ನಡೆದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 'ತಿರುಪತಿ ಮಾದರಿಯಲ್ಲಿ 80 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಚಾಮುಂಡಿ ಬೆಟ್ಟವನ್ನು ಅಭಿವೃದ್ಧಿ ಪಡಿಸಲಾಗುವುದು' ಎಂದು ಪ್ರಕಟಿಸಿದರು.

'ತಿಮ್ಮಪ್ಪನ ದೇವಸ್ಥಾನ ಇರುವ ತಿರುಪತಿ– ತಿರುಮಲದಲ್ಲಿ ಆಗಿರುವ ಪ್ರಗತಿ ಇಲ್ಲೂ ಆದರೆ ಈಗಿರುವ ಪ್ರವಾಸಿಗರ ಸಂಖ್ಯೆ ದುಪ್ಪಟ್ಟು ಆಗಲಿದೆ. ದೇಶಾದ್ಯಂತ ಪ್ರವಾಸಿಗರನ್ನು ಸೆಳೆಯಬಹುದು. ಹೆಚ್ಚು ಮೂಲ ಸೌಕರ್ಯ ಕಲ್ಪಿಸಿದರೆ ವಿದೇಶೀ ಪ್ರವಾಸಿಗರ ಸಂಖ್ಯೆಯಲ್ಲಿಯೂ ಹೆಚ್ಚಳವಾಗಲಿದೆ. ಪ್ರವಾಸಿ ತಾಣಗಳ ಪಟ್ಟಿಯಲ್ಲಿ ಮುಂಚೂಣಿಯಲ್ಲಿರುವ ಮೈಸೂರು, ಜಾಗತಿಕ ಮಟ್ಟದಲ್ಲಿ ಮತ್ತಷ್ಟು ಮೇಲಕ್ಕೇರಲು, ಪ್ರವಾಸೋದ್ಯಮ ನಕ್ಷೆಯಲ್ಲಿ ಶಾಶ್ವತ ಸ್ಥಾನ ಪಡೆಯಲು ಸಹಕಾರಿಯಾಗುತ್ತದೆ. ಪ್ರವಾಸೋದ್ಯಮ ಕ್ಷೇತ್ರ ಬೆಳವಣಿಗೆ ಆಗುವುದರ ಜತೆಗೆ ಸ್ಥಳೀಯವಾಗಿ ಆರ್ಥಿಕ ಚಟುವಟಿಕೆಗಳು ವೃದ್ಧಿಸುತ್ತವೆ. ದೇಗುಲದ ಆದಾಯದಲ್ಲೂ ಹೆಚ್ಚಳವಾಗುತ್ತದೆ' ಎನ್ನುವುದು ಮುಖ್ಯಮಂತ್ರಿಯವರ ವಾದವನ್ನು ಬೆಂಬಲಿಸುವವರ ಆಶಯ.

ಚಾಮುಂಡಿ ಬೆಟ್ಟ ಅಭಿವೃದ್ಧಿ ಯೋಜನೆಯ ಪ್ಯಾಕೇಜ್ ಕೂಡಾ ಆಕರ್ಷಕವಾಗಿದೆ. ಬೆಟ್ಟದ ಮೇಲೆ ವಾಹನ ನಿಲುಗಡೆಗೆ ಬಹುಮಹಡಿ ಕಟ್ಟಡ, ವಾಣಿಜ್ಯ ಸಮುಚ್ಚಯ ನಿರ್ಮಾಣ, ಶೌಚಾಲಯ ಸೇರಿದಂತೆ ಇತರ ಮೂಲ ಸೌಕರ್ಯ ಒದಗಿಸುವುದು ಈ ಯೋಜನೆಯಲ್ಲಿ ಸೇರಿದೆ. ಬೆಟ್ಟಕ್ಕೆ ಬರುವ ವಾಹನ ದಟ್ಟಣೆ ಅಧಿಕವಾಗಿರುವುದರಿಂದ ಮೈಸೂರು ನಗರದಿಂದ ಬೆಟ್ಟಕ್ಕೆ ಚತುಷ್ಪಥ ರಸ್ತೆ ನಿರ್ಮಾಣದಂತಹ ಅಭಿವೃದ್ಧಿ ವಿಚಾರಗಳನ್ನು ಪ್ರಸ್ತಾಪಿಸಲಾಗಿದೆ.

ಬೆಟ್ಟದಲ್ಲಿ ವಾಹನಗಳ ನಿಲುಗಡೆಗೆ ಸೀಮಿತ ಸ್ಥಳಾವಕಾಶ ಇರುವುದರಿಂದ ಬಹುಮಹಡಿ ಕಟ್ಟಡ ನಿರ್ಮಾಣ ಮಾಡಿದರೆ ಸಹಕಾರಿಯಾಗುತ್ತದೆ. 26,055 ಚದರ ಮೀಟರ್ ವಿಸ್ತೀರ್ಣದ ಈ ಕಟ್ಟಡದಲ್ಲಿ 600 ಕಾರುಗಳ ನಿಲುಗಡೆಗೆ ಅವಕಾಶ ಕಲ್ಪಿಸಬಹುದು. ಇದರಿಂದ ಒಂದೆಡೆ ವಾಹನ ನಿಲುಗಡೆ ಮಾಡಲು ಅನುಕೂಲವಾಗುತ್ತದೆ. ದಸರಾ, ಆಷಾಢಮಾಸ, ಶ್ರಾವಣ, ಕಾರ್ತಿಕಮಾಸ ಹಾಗೂ ಇತರೆ ವಿಶೇಷ ಸಂದರ್ಭಗಳಲ್ಲಿ ಒಮ್ಮೆಲೆ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸುವುದರಿಂದ ಬೆಟ್ಟ ಜನರಿಂದ ತುಂಬಿ ಹೋಗುತ್ತದೆ. ವಾಹನಗಳನ್ನು ನಿಲುಗಡೆ ಮಾಡಲು ಸ್ಥಳಾವಕಾಶವೇ ಇರುವುದಿಲ್ಲ. ದಸರಾ ಸಮಯದಲ್ಲಂತೂ ಜನರು ನಿಲ್ಲಲೂ ಅವಕಾಶ ಸಿಗುವುದಿಲ್ಲ. ಬಹುಮಹಡಿ ಕಟ್ಟಡ ನಿರ್ಮಿಸಿದರೆ ವಾಹನ ನಿಲುಗಡೆಗೆ ಪರಿಹಾರ ಸಿಗಲಿದೆ. ಇದರಿಂದಾಗಿ ಪ್ರವಾಸಿಗರ ವಾಹನಗಳು ಸರಾಗವಾಗಿ ಬಂದು ಹೋಗಲು ಸಹಕಾರಿಯಾಗುತ್ತದೆ ಎನ್ನುವುದು ಸರ್ಕಾರದ ವಾದ.

ಈಗ ಬೆಟ್ಟದ ಮೇಲೆ ರಸ್ತೆ ಬದಿಯಲ್ಲೇ ಸಣ್ಣಪುಟ್ಟ ಅಂಗಡಿಗಳನ್ನು ಇಟ್ಟುಕೊಂಡಿರುವುದರಿಂದ ಜನರ ಸಂಚಾರಕ್ಕೆ ಸಾಕಷ್ಟು ಅಡಚಣೆಯಾಗಿದೆ. ವಾಣಿಜ್ಯ ಸಂಕೀರ್ಣ ನಿರ್ಮಾಣವಾದರೆ ವ್ಯಾಪಾರಸ್ಥರಿಗೆ ಶಾಶ್ವತವಾಗಿ ಒಂದು ಜಾಗ ಕಲ್ಪಿಸಿದಂತಾಗುತ್ತದೆ. ವ್ಯವಸ್ಥಿತವಾಗಿ ವಾಣಿಜ್ಯ ಚಟುವಟಿಕೆಗಳು ನಡೆದರೆ ವ್ಯಾಪಾರವೂ ಹೆಚ್ಚುತ್ತದೆ. ನಾಲ್ಕು ಕಾಸು ನೋಡುತ್ತಿದ್ದವರು ಇನ್ನಷ್ಟು ಹೆಚ್ಚಿನ ದುಡಿಮೆ ಕಂಡುಕೊಳ್ಳಬಹುದು. ವ್ಯಾಪಾರಿಗಳ ಆರ್ಥಿಕ ಸ್ಥಿತಿಗತಿಯೂ ಸುಧಾರಿಸುತ್ತದೆ. ಅದಕ್ಕಾಗಿ 2,650 ಚದರ ಮೀಟರ್ ವಿಸ್ತೀರ್ಣದ ಮೂರು

### ಚಾಮುಂಡೇಶ್ವರಿ ವಿಧಾನಸಭೆ ಕ್ಷೇತ್ರ

ಚಾಮುಂಡೇಶ್ವರಿ ದೇವಿ ಭಕ್ತರನ್ನಷ್ಟೇ ಕರುಣಿಸಿಲ್ಲ. ರಾಜಕಾರಣಿಗಳಿಗೂ ದಾರಿ ತೋರಿಸಿದ್ದಾಳೆ. ಚಾಮುಂಡೇಶ್ವರಿ ಹೆಸರಿನಲ್ಲಿ ವಿಧಾನಸಭೆ ಕ್ಷೇತ್ರವೂ ಇದೆ. ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಮೂಲಕವೇ ರಾಜಕೀಯ ನೆಲೆ ಕಂಡುಕೊಂಡವರು. 1983ರಿಂದ 2006ರ ವರೆಗೆ ಸತತವಾಗಿ ಏಳು ಬಾರಿ ಸ್ಪರ್ಧಿಸಿ, ಐದು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದರು. 2008ರಲ್ಲಿ ಹೊಸದಾಗಿ ವರುಣಾ ಕ್ಷೇತ್ರ ರಚನೆಯಾದ ನಂತರ ಈ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದಾರೆ. ಈಗ ಚಾಮುಂಡೇಶ್ವರಿ ಕ್ಷೇತ್ರವನ್ನು ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡ ಪ್ರತಿನಿಧಿಸಿದ್ದಾರೆ.